# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : M/s Halvad Renewables Private Limited ಕಂಪನಿಯವರಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ ಗದಗ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಮಂಜೂರಾಗಿರುವ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 159.39 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 193 ಎನ್‌ಸಿಇ 2020, ದಿನಾಂಕ:29.07.2021
2. ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 306 ಎನ್‌ಸಿಇ 2021, ದಿನಾಂಕ:04.12.2021
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್. ಇ.ಡಿ.ಎಲ್. ರವರ ಪತ್ರ ಸಂಖ್ಯೆ:KREDL/08/HRPL –50 to 159.39 MW/Gadag & Koppal/F-96 (2021)/3457, ದಿನಾಂಕ:23.12.2021.

ಸಂ. 173
ದಿನಾಂಕ 9/1/22

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದನ್ವಯ M/s Sitac Managment & development Private Limited ರವರಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ, ಗದಗ ಮತ್ತು ಯಲಬುರ್ಗ ತಾಲ್ಲೂಕುಗಳ ನಾರಾಯಣಪುರ, ಕೋಟ್ ಉಮಚಗಿ ಮತ್ತು ಜಾಂಪುರ್ ಗ್ರಾಮಗಳಲ್ಲಿ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ISTS ವರ್ಗದಡಿಯಲ್ಲಿ ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದನ್ವಯ M/s Sitac Managment & development Private Limited ರವರಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ, ಗದಗ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಮಂಜೂರಾಗಿರುವ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹೆಸರನ್ನು M/s EDF Renewables India Private Limited ಎಂದು ಬದಲಾಯಿಸಿ, ಸದರಿ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Halvad Renewables Private Limited ರವರಿಗೆ ISTS ವರ್ಗದಡಿ ವರ್ಗಾಯಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್. ಇ.ಡಿ.ಎಲ್. ರವರು M/s Halvad Renewables Private Limited ರವರಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ, ಗದಗ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಮಂಜೂರಾಗಿರುವ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 159.39 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಅಭಿವೃದ್ಧಿದಾರರು ಕೋರಿದ್ದು, ಈ ಸಂಬಂಧ ಅರ್ಜಿ ಮತ್ತು ಡಿಪಿಆರ್ ಶುಲ್ಕವನ್ನು ಪಾವತಿಸಿರುವುದಾಗಿ ಹಾಗೂ ಸದರಿ ಕಂಪನಿಯು M/s EDF Renouvelables SA, France ರವರಿಂದ ಸ್ಥಾಪಿಸಲ್ಪಟ್ಟ SPV ಸಂಸ್ಥೆಯಾಗಿರುತ್ತದೆ. M/s EDF Renouvelables SA, France ಕಂಪನಿಯು ನಿಗದಿತ ನೆಟ್‌ವರ್ತ್ ಹೊಂದಿರುವುದಾಗಿ ತಿಳಿಸಿರುತ್ತಾರೆ.

MD KREDL

ಆದ್ದರಿಂದ, M/s Halvad Renewables Private Limited ರವರಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ, ಗದಗ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 159.39 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಕೇಂದ್ರ ಸರ್ಕಾರದ Power Grid Corporation of India Limited (PGCIL) ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್/ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡಲು ಅನುಮತಿಸಿ, ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಟೋಪೋಶೀಟ್ ಸಂಖ್ಯೆ:48/M/14 ರಲ್ಲಿ ನೀಡಿರುವ ಅಕ್ಷಾಂಶ ಮತ್ತು ರೇಖಾಂಶಗಳ ಸ್ಥಳದಲ್ಲಿ ಸದರಿಯವರು 46 ಸಂಖ್ಯೆಯ ವಿಂಡ್ ಟರ್ಬೈನ್‌ಗಳನ್ನು

....2

ಅಳವಡಿಸುವ ಮತ್ತು ಪ್ರತಿ ಟರ್ಬೈನ್ 04 ಎಕರೆಯಂತೆ ಲೆಕ್ಕೀಕರಿಸಿ 184 ಎಕರೆ (46 Nos of WTG X 4 Acre = 184 Acre) ಖಾಸಗಿ ಜಮೀನನ್ನು ಉಪಯೋಗಿಸಿಕೊಳ್ಳಬೇಕಾಗುತ್ತದೆ ಎಂಬ ಅಭಿಪ್ರಾಯದೊಂದಿಗೆ ಸದರಿ ಯೋಜನೆಯ ಚೆಕ್ ಲಿಸ್ಟ್ ನೊಂದಿಗೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 325 ಎನ್‌ಸಿಇ 2021**
**ಬೆಂಗಳೂರು ದಿನಾಂಕ:19.01.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Halvad Renewables Private Limited ರವರಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ ಗದಗ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಮಂಜೂರಾಗಿರುವ 50 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 159.39 ಮೆ.ವ್ಯಾ ಸಾಮರ್ಥ್ಯಕ್ಕೆ ಈ ಕೆಳಕಂಡ ಶೆಡ್ಯೂಲ್ ಹಾಗೂ ಷರತ್ತುಗಳಿಗೊಳಪಟ್ಟು ಹೆಚ್ಚಿಸಿ ಆದೇಶಿಸಿದೆ.

**Geographical area description for 159.39 MW capacity wind power project of M/s Halvad Renewables Private Limited**

| Sl. No. | Geographical area description of the project | Near by villages of the proposed area & District | Existing capacity in MW | Capacity on enhancement in MW | Total capacity in MW |
|---|---|---|---|---|---|
| 1 | The proposed area is in plain land and road crossing between Gadag and Naregal. The area is surrounded by the Points A, B, C, D, E, F, G, H, I, J, K and are held in the following Geographical co-ordinates as:<br><br>**Point A:** Lat:15°30′0″, Long: 75°45′0″N<br>**Point B:** Lat:15°32′13.27″, Long: 75°45′0″N<br>**Point C:** Lat:15°32′11.04″, Long: 75°47′27.81″N<br>**Point D:** Lat:15°30′56.37″, Long: 75°47′28.48″N<br>**Point E:** Lat:15°30′53.64″, Long: 75°50′5.64″N<br>**Point F:** Lat:15°30′25.27″, Long: 75°51′13.21″N<br>**Point G:** Lat:15°33′32.76″, Long: 75°51′33.40″N<br>**Point H**: Lat:15°33′42.73″, Long: 75°50′3.55″N<br>**Point I:** Lat:15°35′0″, Long: 75°50′3.08″N<br>**Point J:** Lat: Lat:15°35′0″, Long: 75°51′38.16″N<br>**Point K:** Lat:15°30′0″, Long: 75°51′42.12″N<br>**Peaks:** 640, 628, 663, 642, 626, 633, 635, 621 & 643m AMSL.<br><br>**Toposheet No:** 48 M/14 | Narayanapur, Kot Umachagi and Jampur villages of **Gadag and Yelburga taluks, Gadag and Koppal districts.** | 50 MW | 109.39 MW | 159.39 MW (46 Nos x 3465 kW) |

...3